**Bangalore**
**Regional News**
**07.03.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ವಿತ್ತೀಯ ಹೊಣೆಗಾರಿಕೆ ಮಾನದಂಡಗಳ ಮಿತಿಯಲ್ಲೇ ಬಜೆಟ್ ಮಂಡನೆ ; ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ
2. ಬಜೆಟ್ ಕುರಿತಂತೆ ವಿಧಾನಮಂಡಲ ಸದಸ್ಯರಿಗೆ ತರಬೇತಿ ಕಾರ್ಯಾಗಾರ ; ಶಾಸಕರು ಪಾಲ್ಗೊಳ್ಳುವಂತೆ ವಿಧಾನಸಭಾಧ್ಯಕ್ಷರ ಮನವಿ
3. ಮಂಡ್ಯ ವಿ.ಸಿ. ಫಾರಂನಲ್ಲಿ ಆಧುನಿಕ ಕ್ರೀಡಾಂಗಣಕ್ಕೆ ಕೇಂದ್ರ ಕ್ರೀಡಾ ಸಚಿವರಿಂದ ಶಂಕುಸ್ಥಾಪನೆ ; ಸಚಿವ ಹೆಚ್.ಡಿ. ಕುಮಾರಸ್ವಾಮಿ
4. ಕಲಬುರಗಿ ಓಪನ್ ಐಟಿಎಫ್ ಟೆನಿಸ್ ; ಇಂದು ಮಧ್ಯಾಹ್ನ ಡಬಲ್ಸ್ ಫೈನಲ್ಸ್

<><><><>

ರಾಜ್ಯದ ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯದ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ, ವಿತ್ತೀಯ ಹೊಣೆಗಾರಿಕೆ ಕಾಯ್ದೆಯ ಮಾನದಂಡಗಳ ಮಿತಿಯಲ್ಲೇ ದಾಖಲೆಯ ೧೭ನೇ ಬಜೆಟ್ ಮಂಡಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ಮೈಸೂರು ತಾಲ್ಲೂಕಿನ ಪಿಲ್ಲಹಳ್ಳಿ ಗ್ರಾಮದಲ್ಲಿ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಲ್ಲುವ ಮುನ್ನ ಇಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯದ ಸಾಲದ ಪ್ರಮಾಣವು ನಿಗದಿತ ಶೇಕಡಾ ೨೫ರ ಮಿತಿಯೊಳಗೇ ಅಂದರೆ ಶೇಕಡಾ ೨೪ ಪಾಯಿಂಟ್ ೯೪ ರಷ್ಟಿದೆ ಎಂದರು. ಸಾಮಾಜಿಕ ನ್ಯಾಯದಡಿ ಸಮಾನ ಅವಕಾಶ ಒದಗಿಸುವ ಕೆಲಸ ಮಾಡಲಾಗಿದೆ. ಯಾವುದೇ ಒಂದು ವರ್ಗ ಅಥವಾ ಕೆಲವೇ ವರ್ಗಕ್ಕೆ ಬಜೆಟ್ ಮಂಡಿಸಿಲ್ಲ ಬದಲಾಗಿ ಎಲ್ಲಾ ವರ್ಗಕ್ಕೂ ಅನುಕೂಲವಾಗುವ ರೀತಿಯಲ್ಲಿ ಬಜೆಟ್ ಮಂಡನೆ ಮಾಡಲಾಗಿದೆ ಎಂದರು. ಅನೇಕ ಹಿನ್ನಡೆಯ ನಡುವೆಯೂ ಜನಸಾಮಾನ್ಯರ ಮೇಲೆ ಹೊಸ ತೆರಿಗೆ ಹೇರದೆ, ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸುತ್ತಿರುವುದಾಗಿ ಅವರು ಸ್ಪಷ್ಟಪಡಿಸಿದರು. ಪಕ್ಷದ ಹೈಕಮಾಂಡ್ ತೀರ್ಮಾನಿಸಿದರೆ ಮುಂದಿನ ದಿನಗಳಲ್ಲಿ ಇನ್ನೂ ಎರಡು ಬಜೆಟ್ ಮಂಡಿಸಿ ರಾಜ್ಯವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವುದಾಗಿ ಇದೇ ಸಂದರ್ಭದಲ್ಲಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

<><><><>

ಬಜೆಟ್ ಕುರಿತಂತೆ ಇದೇ ಸೋಮವಾರ ಶಾಸಕರಿಗಾಗಿ ಬೆಂಗಳೂರಿನಲ್ಲಿ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿವೇಶನದಲ್ಲಿ ಮಂಡಿಸಲಾದ ಬಜೆಟ್ ಕುರಿತು ಮೂರು ವಾರಗಳ ಕಾಲ ಸುದೀರ್ಘ ಚರ್ಚೆಗೆ ಅವಕಾಶ ಇದೆ. ಇದಕ್ಕೆ ಪೂರ್ವಭಾವಿಯಾಗಿ ಬಜೆಟ್ ಕುರಿತು ಸಂಪೂರ್ಣ ಮಾಹಿತಿ ನೀಡಲು ಶಾಸಕರಿಗೆ ಈ ಕಾರ್ಯಾಗಾರವನ್ನು ವ್ಯವಸ್ಥೆ ಮಾಡಲಾಗಿದೆ ಎಂದರು. ೧೬ ಬಾರಿ ಬಜೆಟ್ ಮಂಡಿಸಿದ ಅನುಭವ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಾಗಾರ ನಡೆಸಿಕೊಡಲಿದ್ದಾರೆ. ಇದರಲ್ಲಿ ಹಿರಿಯ ಅಧಿಕಾರಿಗಳು ಕೂಡ ಭಾಗವಹಿಸಲಿದ್ದು, ಬಜೆಟ್ ಎಂದರೇನು- ಅನುದಾನದ ಹಂಚಿಕೆ ಹೇಗೆ- ಅನುದಾನದ ಬಳಕೆ ಹೇಗೆ- ಇತ್ಯಾದಿ ವಿಷಯಗಳ ಕುರಿತು ಈ ಕಾರ್ಯಾಗಾರ ಬೆಳಕು ಚೆಲ್ಲಲಿದೆ ಎಂದು ಅವರು ತಿಳಿಸಿದರು.

<><><><>

ಬಜೆಟ್‌ನಲ್ಲಿ ಮಾನವ ವನ್ಯಜೀವಿ ಸಂಘ? ನಿಯಂತ್ರಿಸಲು ಒಂದು ಸಾವಿರದ ೫೦೦ ಕೋಟಿ ರೂಪಾಯಿ ಘೋಷಿಸಿರುವುದನ್ನು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಸ್ವಾಗತಿಸಿದ್ದಾರೆ. ರಾಜ್ಯದಲ್ಲಿ ಚಿರತೆಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರು ಹೊರವಲಯದ ಬನ್ನೇರುಘಟ್ಟದಲ್ಲಿ ೫ ಕೋಟಿ ರೂಪಾಯಿ ವೆಚ್ಚದಲ್ಲಿ ಚಿರತೆ ಪುನರ್ವಸತಿ ಕೇಂದ್ರ ಸ್ಥಾಪಿಸುತ್ತಿರುವುದೂ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ೨೦೨೫-೨೬ರ ಸಾಲಿನಲ್ಲಿ ಅರಣ್ಯ ಇಲಾಖೆಯ ವಿವಿಧ ವೃಂದದಲ್ಲಿ ಖಾಲಿ ಇರುವ ಸುಮಾರು ೨ ಸಾವಿರ ಹುದ್ದೆಗಳ ಭರ್ತಿ ಮಾಡಲಾಗುತ್ತಿದ್ದು, ಇದು ಕೂಡ ಇಲಾಖೆಯ ಸಮಗ್ರ ಕಾರ್ಯವೈಖರಿಯ ಸುಧಾರಣೆಗೆ ಚೈತನ್ಯತುಂಬಲಿದೆ ಎಂದು ಅವರು ತಿಳಿಸಿದ್ದಾರೆ. ಜಾಗತಿಕ ತಾಪಮಾನ ಏರಿಕೆ ಹಾಗೂ ಹವಾಮಾನ ಬದಲಾವಣೆಯ ಪ್ರತಿಕೂಲ ಪರಿಣಾಮ ಎದುರಿಸುತ್ತಿರುವ ಪ್ರಸಕ್ತ ಸನ್ನಿವೇಶದಲ್ಲಿ ಶೇಕಡ ೧೦ಕ್ಕಿಂತ ಕಡಿಮೆ ಅರಣ್ಯ ಇರುವ ಜಿಲ್ಲೆಗಳಲ್ಲಿ ಸುಮಾರು ೬೫ ಸಾವಿರ ಹೆಕ್ಟೇರ್‌ನಲ್ಲಿ ಅರಣ್ಯೀಕರಣ ಚಟುವಟಿಕೆಗಳಿಗೆ ಕೆ.ಕೆ.ಆರ್.ಡಿ.ಬಿ.ಯ ೫೦ ಕೋಟಿ ರೂಪಾಯಿ ಸೇರಿದಂತೆ ೧೫೦ ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ. ರಾಜ್ಯದ ಜನರಿಗೆ ಶುದ್ಧ ಗಾಳಿಯ ಖಾತ್ರಿಗಾಗಿ ರಾಜ್ಯಾದ್ಯಂತ ೧೫ ಹೊಸ ಪರಿವೇಷ್ಠಿಕ ನಿರಂತರ ವಾಯು ಗುಣಮಟ್ಟದ ಮಾಪನ ಕೇಂದ್ರಗಳನ್ನು ಸ್ಥಾಪಿಸುತ್ತಿರುವುದು ಅತ್ಯಂತ ಅಗತ್ಯ ಹಾಗೂ ಮಹತ್ವದ ಹೆಜ್ಜೆಯಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

<><><><>

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅನು?ನ ಸಮಿತಿಯ ಮಾರ್ಗಸೂಚಿ ಪ್ರಕಾರ ಯಾವುದೇ ಅಂಗಡಿ, ಕಚೇರಿ ಅಥವಾ ಸಂಸ್ಥೆಗಳ ನಾಮಫಲಕಗಳಲ್ಲಿ ಕನ್ನಡ ಭಾ?ಗೆ ಕನಿ? ಅರವತ್ತು ಪ್ರತಿಶತ ಪ್ರಾಮುಖ್ಯತೆ ನೀಡುವುದು ಕಡ್ಡಾಯವಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ತಿಳಿಸಿದ್ದಾರೆ. ಬೀದರ ನಗರದಲ್ಲಿಂದು ಪ್ರಾಧಿಕಾರದ ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸದಸ್ಯರ ಸಭೆಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಸ್ಥಳಗಳಲ್ಲಿ ಕನ್ನಡದ ಬಳಕೆಯನ್ನು ಹೆಚ್ಚಿಸುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ. ಕನ್ನಡ ಶಾಲೆಗಳ ಬೆಳವಣಿಗೆಗೆ ಸರ್ಕಾರ ಹಾಗೂ ಸಮಾಜ ಎರಡೂ ಕೈಜೋಡಿಸಬೇಕಾಗಿದೆ. ಗ್ರಾಮೀಣ ಭಾಗಗಳಲ್ಲಿ ಕನ್ನಡ ಮಾಧ್ಯಮ ಶಾಲೆಗಳ ಮೂಲ ಸೌಕರ್ಯಗಳನ್ನು ಬಲಪಡಿಸುವುದು, ಅರ್ಹ ಶಿಕ್ಷಕರನ್ನು ನೇಮಕ ಮಾಡುವುದು ಹಾಗೂ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ವ್ಯವಸ್ಥೆ ಕಲ್ಪಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಜೊತೆಗೆ ಪಾಲಕರು ತಮ್ಮ ಮಕ್ಕಳನ್ನು ಕನ್ನಡ ಶಾಲೆಗಳಲ್ಲಿ ಸೇರಿಸುವಂತೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಸಲಹೆ ನೀಡಿದರು.

<><><>

ಕೇಂದ್ರ ಲೋಕಸೇವಾ ಆಯೋಗ ನಡೆಸಿದ ಪರೀಕ್ಷೆಯಲ್ಲಿ ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಕರಡಹಳ್ಳಿ ಗ್ರಾಮದ ಧನಂಜಯ ೫೫೪ನೇ ರ್ಯಾಂಕ್ ಪಡೆದಿದ್ದಾರೆ. ಈ ಬಗ್ಗೆ ತಮ್ಮ ಸಂತಸ ಹಂಚಿಕೊಂಡಿರುವ ಧನಂಜಯ ಅವರು, ಸುಮಾರು ೭ ವರ್ಷಗಳ ಅವಿರತ ಪ್ರಯತ್ನದ ನಂತರ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉತ್ತಮ ರ್ಯಾಂಕ್ ಪಡೆಯಲು ಸಾಧ್ಯವಾಯಿತು ಎಂದು ತಿಳಿಸಿದ್ದಾರೆ. ೧೦ನೇ ತರಗತಿ ವರೆಗೂ ಕನ್ನಡ, ನಂತರ ಇಂಗ್ಲೀಷ್‌ನಲ್ಲಿ ಓದಿ, ಇಂಗ್ಲೀಷ್‌ನಲ್ಲೇ ಪರೀಕ್ಷೆ ಬರೆದಿರುವುದಾಗಿ ಅವರು ಹೇಳಿದರು. ತಂದೆ-ತಾಯಿ ಶ್ರಮವಹಿಸಿ ತಮ್ಮನ್ನು ಓದಿಸಿದ್ದು, ಅದಕ್ಕೆ ಕೃತಜ್ಞರಾಗಿರುವುದಾಗಿ ಧನಂಜಯ ಹೇಳಿದ್ದಾರೆ.

<><><>

ಮಂಡ್ಯ ಜಿಲ್ಲೆಯ ವಿ.ಸಿ. ಫಾರಂನಲ್ಲಿ ೧೪ ಕೋಟಿ ರೂಪಾಯಿ ವೆಚ್ಚದಲ್ಲಿ ನೂತನವಾಗಿ ನಿರ್ಮಾಣ ಆಗಲಿರುವ ಸುಸಜ್ಜಿತ, ಆಧುನಿಕ ಕ್ರೀಡಾಂಗಣಕ್ಕೆ ಇದೇ ತಿಂಗಳು ೧೪ರಂದು ಕೇಂದ್ರದ ಯುವ ಮತ್ತು ಕ್ರೀಡಾ ಸಬಲೀಕರಣ ಖಾತೆ ಸಚಿವ ಮನ್ಸೂಖ್ ಮಾಂಡವೀಯ ಚಾಲನೆ ನೀಡಲಿದ್ದಾರೆ. ಕೇಂದ್ರದ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಈ ವಿಷಯ ತಿಳಿಸಿದ್ದಾರೆ. ಅವರು ಇಂದು ಮಂಡ್ಯ ತಾಲ್ಲೂಕು ವಿ.ಸಿ.ಫಾರಂನ ಕ್ರೀಡಾಂಗಣ ನಿರ್ಮಾಣದ ಸ್ಥಳ ಪರಿಶೀಲನೆ ನಡೆಸಿ, ಕಾರ್ಯಕ್ರಮದ ಸಿದ್ಧತೆಗಳನ್ನು ಕೂಡ ವೀಕ್ಷಿಸಿದರು. ನಂತರ ಮಾತನಾಡಿ,

ಗ್ರಾಮೀಣ ಪ್ರದೇಶದ ಕ್ರೀಡಾಪಟುಗಳಿಗೆ ಅನುಕೂಲವಾಗಲೆಂದು ಕೇಂದ್ರ ಕ್ರೀಡಾ ಇಲಾಖೆಯಿಂದ ಐದು ಎಕರೆ ಜಾಗದಲ್ಲಿ ಕ್ರೀಡಾಂಗಣ ನಿರ್ಮಾಣವಾಗುತ್ತಿದೆ ಎಂದು ತಿಳಿಸಿದರು.

ಧ್ವನಿ : ಹೆಚ್.ಡಿ.ಕುಮಾರಸ್ವಾಮಿ (೩೨ ಸೆಕೆಂಡ್‌ಗಳು)

<><><>

ಉತ್ತರಕನ್ನಡ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿನ ಕೈಗಾರಿಕಾ ವಸಾಹತುಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಸೂಚಿಸಿದ್ದಾರೆ. ಅವರು ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಕೈಗಾರಿಕಾ ಇಲಾಖೆಯ ವಿವಿಧ ಸಮಿತಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಗರ ಸ್ಥಳೀಯ ಸಂಸ್ಥೆಗಳು ಕೈಗಾರಿಕೆಗಳಿಂದ ತೆರಿಗೆ ವಸೂಲಿ ಮಾಡುತ್ತಿದ್ದು, ಈ ಪ್ರದೇಶದಲ್ಲಿ ಅಗತ್ಯವಿರುವ ಕಾಮಗಾರಿಗಳನ್ನು ಕೈಗೊಳ್ಳುತ್ತಿಲ್ಲ ಎಂದು ಕೈಗಾರಿಕೋದ್ಯಮಿಗಳು ನೀಡಿದ ದೂರಿಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯ ಕೈಗಾರಿಕಾ ವಸಾಹತುಗಳಲ್ಲಿ ನೀರು, ವಿದ್ಯುತ್, ರಸ್ತೆ, ತ್ಯಾಜ್ಯ ನಿರ್ವಹಣೆ ಸೇರಿದಂತೆ ಇತರೇ ಅಗತ್ಯ ಕಾಮಗಾರಿಗಳನ್ನು ನಿರ್ವಹಿಸುವ ಕುರಿತು ತಮ್ಮ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳುವಂತೆ ಸೂಚನೆ ನೀಡಿದರು.

<><><>

ಚಿಕ್ಕಬಳ್ಳಾಪುರ ನಗರಸಭೆಯ ಆಯವ್ಯಯ ಪತ್ರ ಮಂಡನೆಯಾಗಬೇಕಾದ ಹಿನ್ನೆಲೆಯಲ್ಲಿ ನಗರದ ಅಭಿವೃದ್ಧಿ ದೃಷ್ಟಿಯಿಂದ ಸಾರ್ವಜನಿಕರು, ನಾಗರೀಕರ ಅಭಿಪ್ರಾಯಗಳನ್ನು ಸಂಗ್ರಹಿಸಲು ಇದೇ ೧೦ ರಂದು ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ನಾಗರೀಕರು ಭಾಗವಹಿಸಿ ತಮ್ಮ ಅಮೂಲ್ಯವಾದ ಸಲಹೆಗಳನ್ನು ನೀಡಬೇಕೆಂದು ಪೌರಾಯುಕ್ತ ಮನ್ಸೂರ್ ಆಲಿ ಮನವಿ ಮಾಡಿದ್ದಾರೆ.

<><><>

'ಜನಗಣತಿ-೨೦೨೭ ರ ಕಾರ್ಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಯಾವುದೇ ಲೋಪದೋ?ಗಳಿಲ್ಲದಂತೆ ನಿಖರ ದತ್ತಾಂಶ ಸಂಗ್ರಹಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ" ಎಂದು ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಕೇಂದ್ರ ಜನಗಣತಿ ಇಲಾಖೆ ವತಿಯಿಂದ ತಹಶೀಲ್ದಾರ್ ಹಾಗೂ ಶಿರಸ್ತೇದಾರರಿಗಾಗಿ ಆಯೋಜಿಸಲಾಗಿದ್ದ ಮೂರು ದಿನಗಳ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. ತಹಶೀಲ್ದಾರರು ತಮ್ಮ ವ್ಯಾಪ್ತಿಯಲ್ಲಿ ಗಣತಿದಾರರಿಗೆ ತರಬೇತಿ ನೀಡುವಾಗ ದೊಡ್ಡ ಗುಂಪುಗಳ ಬದಲಿಗೆ ಸಣ್ಣ ತಂಡಗಳನ್ನು ರಚಿಸಬೇಕು. ಇದರಿಂದ ಗಣತಿಯ ತಾಂತ್ರಿಕ ಅಂಶಗಳು ಎಲ್ಲರಿಗೂ ಸ್ಪ?ವಾಗಿ ಅರ್ಥವಾಗುತ್ತವೆ ಎಂದರು.

<><><>

ಕಲಬುರಗಿಯ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ, ನಾಳೆ ಸಮಾರೋಪಗೊಳ್ಳಲಿರುವ, ೩೦ ಸಾವಿರ ಅಮೆರಿಕನ್ ಡಾಲರ್ ಪುರಸ್ಕಾರದ, ಕಲಬುರಗಿ ಓಪನ್ ಐ.ಟಿ.ಎಫ್. ೩೫, ಮಹಿಳೆಯರ ಟೆನಿಸ್ ಟೂರ್ನಿಯ, ಡಬಲ್ಸ್ ಫೈನಲ್ಸ್ ಇಂದು ಮಧ್ಯಾಹ್ನ ನಡೆಯಲಿದೆ. ವೈಷ್ಣವಿ ಆಡ್ಕರ್ ಹಾಗೂ ಅಂಕಿತಾ ರೈನಾ, ಕರ್ನಾಟಕದ, ಸೋಹಾ ಸಾದಿಕ್ ಮತ್ತು ಆಕಾಂಕ್ಷಾ ದಿಲೀಪ ನಿಟ್ಟೂರು ಜೋಡಿ, ಅಂತಿಮ ಪಂದ್ಯದಲ್ಲಿ, ಪ್ರಶಸ್ತಿಗಾಗಿ ಸೆಣೆಸಲಿವೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>